**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 32 |
| ಸದಸ್ಯರ ಹೆಸರು | : | ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 29-01-2021 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ: 62580<br>ಮಿನಿ ಅಂಗನವಾಡಿ ಕೇಂದ್ರಗಳ ಸಂಖ್ಯೆ: 3331<br>ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ: 1720972<br><br>ಜಿಲ್ಲಾವಾರು ವಿವರಗಳನ್ನು **ಅನುಬಂಧ** ದಲ್ಲಿ ಒದಗಿಸಿದೆ. |
| ಆ | ಈ ಕೇಂದ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ಸದರಿ ಕೇಂದ್ರಗಳಲ್ಲಿ 64242 ಅಂಗನವಾಡಿ ಕಾರ್ಯಕರ್ತೆಯರು ಸೇವೆ ಸಲ್ಲಿಸುತ್ತಿದ್ದಾರೆ. ಜಿಲ್ಲಾವಾರು ವಿವರಗಳನ್ನು **ಅನುಬಂಧ** ದಲ್ಲಿ ಒದಗಿಸಿದೆ. |
| ಇ | ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರ ನೀಡುತ್ತಿರುವ ಗೌರವಧನ ಎಷ್ಟು; ಗೌರವ ಧನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಯಾವುವು; | ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ. 10,000/-<br>ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ.6,250/-<br>ಅಂಗನವಾಡಿ ಸಹಾಯಕಿಯರಿಗೆ ಮಾಹೆಯಾನ ರೂ.5,250/-ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ.<br><br>ಇದಲ್ಲದೇ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಪ್ರತಿ ವರ್ಷ 2 ಜೊತೆ ಸಮವಸ್ತ್ರ, ವೈದ್ಯಕೀಯ ವೆಚ್ಚ ಮರುಪಾವತಿ, ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ ಮತ್ತು ಭಾಗ್ಯಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳನ್ನು ನೊಂದಾಯಿಸಿದ್ದಲ್ಲಿ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ.<br><br>ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೊಂದಾಯಿಸಲಾಗಿದೆ. ಸೇವೆಯಲ್ಲಿರುವಾಗಲೇ ಮೃತಪಟ್ಟ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಕುಟುಂಬದ ಅವಲಂಬಿತರಿಗೆ ರೂ. 50,000/- ಮರಣ ಪರಹಾರ ನಿಧಿಯನ್ನು ಸಹ ನೀಡಲಾಗುತ್ತಿದೆ. 15 ದಿನಗಳ ಬೇಸಿಗೆ ರಜೆಯನ್ನು ನೀಡಲಾಗುತ್ತಿದೆ. |
| ಈ | ಪ್ರತಿ ತಿಂಗಳು ಸಮಯಕ್ಕೆ ಸರಿಯಾಗಿ ಗೌರವಧನ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು; ಸಮಯಕ್ಕೆ ಸರಿಯಾಗಿ ಗೌರವ ಧನ ಪಾವತಿಸಲು ಕೈಗೊಂಡಿರುವ ಕ್ರಮಗಳೇನು; | ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ಸಕಾಲದಲ್ಲಿ ಗೌರವಧನ ಪಾವತಿಸಲಾಗುತ್ತಿದೆ. |

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 31 ಐಸಿಡಿ 2021

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಘುನಾಥ ರಾವ್ ಮಲ್ಕಾಪೂರೆ ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ.32ಕ್ಕೆ ಅನುಬಂಧ

ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಮಕ್ಕಳ ವಿವರ

| ಕ್ರ.ಸಂ | ಜಿಲ್ಲೆಯ ಹೆಸರು | ಕಾರ್ಯನಿರತ ಅಂಗನವಾಡಿ ಕೇಂದ್ರಗಳ ಸಂಖ್ಯೆ | ಕಲಿಯುತ್ತಿರುವ ಒಟ್ಟು ಮಕ್ಕಳ ಸಂಖ್ಯೆ (3 ರಿಂದ 6 ವರ್ಷ) | ಕಾರ್ಯನಿರತ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ |
|---|---|---|---|---|
| 1 | ಬಾಗಲಕೋಟೆ | 2221 | 80161 | 2168 |
| 2 | ಬೆಂಗಳೂರು (ಗ್ರಾ) | 1229 | 21700 | 1206 |
| 3 | ರಾಮನಗರ | 1543 | 24474 | 1480 |
| 4 | ಬೆಂಗಳೂರು (ನ) | 2420 | 54778 | 2344 |
| 5 | ಬೆಳಗಾವಿ | 5294 | 177245 | 5169 |
| 6 | ಬಳ್ಳಾರಿ | 2784 | 107767 | 2740 |
| 7 | ಬೀದರ್ | 1893 | 42756 | 1778 |
| 8 | ವಿಜಯಪುರ | 2313 | 87958 | 2263 |
| 9 | ಚಾಮರಾಜನಗರ | 1421 | 28119 | 1363 |
| 10 | ಚಿಕ್ಕಮಗಳೂರು | 1825 | 27279 | 1778 |
| 11 | ಚಿತ್ರದುರ್ಗ | 2324 | 57438 | 2283 |
| 12 | ಮಂಗಳೂರು | 2104 | 81660 | 2082 |
| 13 | ದಾವಣಗೆರೆ | 1721 | 45309 | 1700 |
| 14 | ಧಾರವಾಡ | 1505 | 52533 | 1473 |
| 15 | ಗದಗ | 1166 | 42243 | 1115 |
| 16 | ಕಲಬುರಗಿ | 3098 | 85240 | 3015 |
| 17 | ಯಾದಗಿರಿ | 1386 | 69562 | 1364 |
| 18 | ಹಾಸನ | 2523 | 37388 | 2453 |
| 19 | ಹಾವೇರಿ | 1918 | 61064 | 1852 |
| 20 | ಕೋಲಾರ | 2061 | 33850 | 1999 |
| 21 | ಚಿಕ್ಕಬಳ್ಳಾಪುರ | 1961 | 42480 | 1914 |
| 22 | ಕೊಡಗು | 871 | 11642 | 851 |
| 23 | ಕೊಪ್ಪಳ | 1850 | 69588 | 1791 |
| 24 | ಮಂಡ್ಯ | 2546 | 35946 | 2462 |
| 25 | ಮೈಸೂರು | 2860 | 59103 | 2811 |
| 26 | ರಾಯಚೂರು | 2662 | 92601 | 2627 |
| 27 | ಶಿವಮೊಗ್ಗ | 2439 | 45769 | 2350 |
| 28 | ತುಮಕೂರು | 4095 | 65583 | 4007 |
| 29 | ಉಡುಪಿ | 1191 | 26670 | 1186 |
| 30 | ಉತ್ತರ ಕನ್ನಡ | 2687 | 53066 | 2618 |
| | ರಾಜ್ಯದ ಒಟ್ಟು | **65911** | **1720972** | **64242** |